# ‘ಕನ್ನಡದಲ್ಲಿ ವ್ಯವಹರಿಸಲು ಹಿಂಜರಿಕೆ ಬೇಡ’

ಪ್ರಜಾವಾಣಿ ವಾರ್ತೆ

ಮೈಸೂರು: ‘ತ್ರಿಭಾಷಾ ಸೂತ್ರದಡಿಯಲ್ಲಿಯೇ ಸಂಸ್ಥೆಯು ಕಾರ್ಯ ನಿರ್ವಹಿಸುತ್ತಿರುವುದರಿಂದ ಕನ್ನಡದಲ್ಲಿ ವ್ಯವಹರಿಸಲು ಹಿಂಜರಿಯಬೇಕಿಲ್ಲ’ ಎಂದು ಕೇಂದ್ರೀಯ ಆಹಾರ ತಂತ್ರಜ್ಞಾನ ಮತ್ತು ಸಂಶೋಧನಾ ಸಂಸ್ಥೆಯ (ಸಿಎಫ್‌ಟಿಆರ್‌ಐ) ನಿರ್ದೇಶಕಿ ಡಾ.ಶ್ರೀದೇವಿ ಅನ್ನಪೂರ್ಣ ಸಿಂಗ್ ಹೇಳಿದರು.

ಸಂಸ್ಥೆಯಲ್ಲಿ ಕನ್ನಡ ಸಹೃದಯ ಬಳಗವು ಸೋಮವಾರ ಆಯೋಜಿಸಿದ್ದ ಕರ್ನಾಟಕ ರಾಜ್ಯೋತ್ಸವದ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು, ‘1986ರಲ್ಲಿ ಎಂ.ಎಸ್ಸಿ ಮಾಡಲು ಸಂಸ್ಥೆಗೆ ಬಂದೆ. ಅಲ್ಲಿಂದಲೂ ಕನ್ನಡ ಮತ್ತು ಮೈಸೂರು ನನ್ನ ಜೀವನದ ಭಾಗವಾಗಿವೆ. ಕನ್ನಡಿಗರ ಸರಳತೆ, ಪ್ರೀತಿ, ಆಹಾರ ಪದ್ಧತಿ ನನ್ನನ್ನು ಮೋಡಿ ಮಾಡಿದೆ’ ಎಂದರು.

‘ಮೈಸೂರು ಒಡೆಯರ ಉದಾರತೆಯ ಫಲವಾಗಿ 1950ರಲ್ಲಿ ಸಂಸ್ಥೆಯು ಸ್ಥಾಪನೆಗೊಂಡಿದೆ’ ಎಂದು ಹೇಳಿದರು.



ಮೈಸೂರಿನ ಕೇಂದ್ರೀಯ ಆಹಾರ ತಂತ್ರಜ್ಞಾನ ಮತ್ತು ಸಂಶೋಧನಾ ಸಂಸ್ಥೆಯಲ್ಲಿ ಸೋಮವಾರ ಕರ್ನಾಟಕ ರಾಜ್ಯೋತ್ಸವ ಧ್ವಜಾರೋಹಣ ನೆರವೇರಿಸಲಾಯಿತು. ಸಂಸ್ಥೆಯ ನಿರ್ದೇಶಕಿ ಡಾ.ಶ್ರೀದೇವಿ ಅನ್ನಪೂರ್ಣ ಸಿಂಗ್, ಕೆಪಿಸಿಸಿ ಕಾರ್ಯಾಧ್ಯಕ್ಷ, ನರಹರಿಶಾಸ್ತ್ರಿ ಇದ್ದರು

ಕೆಪಿಸಿಸಿ ಕಾರ್ಯಾಧ್ಯಕ್ಷ ಧ್ರುವನಾರಾಯಣ, ‘30 ವರ್ಷಗಳಿಂದ ಅಭಿವೃದ್ಧಿಯಲ್ಲಿ ವೇಗ ಸಾಧಿಸಿರುವ ರಾಜ್ಯವು ದೇಶಕ್ಕೆ ಮಾದರಿಯಾಗಿದೆ. ಮಾಹಿತಿ ತಂತ್ರಜ್ಞಾನವಷ್ಟೇ ಅಲ್ಲದೆ ಎಲ್ಲ ಕ್ಷೇತ್ರಗಳಲ್ಲೂ ಕರ್ನಾಟಕ ಮೊದಲ ಸ್ಥಾನದಲ್ಲಿದೆ. ರಾಜ್ಯದ ಅರಣ್ಯ ಪ್ರದೇಶವು ಹೆಚ್ಚಳಗೊಂಡಿದ್ದರಿಂದ ಹುಲಿಗಳ ಸಂಖ್ಯೆ ಏರಿಕೆ ಕಂಡಿದೆ. ಸಮೃದ್ಧ ಕಾಡುಗಳು ಇದ್ದರೆ, ಕೃಷಿ ಪ್ರಗತಿಯೂ ಸಾಧ್ಯ’ ಎಂದು ಹೇಳಿದರು.

ಕನ್ನಡ ಸಹೃದಯ ಬಳಗದ ಸದಸ್ಯರು ಕನ್ನಡ ಗೀತೆಗಳನ್ನು ಹಾಡಿದರು.

ಸಂಸ್ಥೆಯ ಈಶಾನ್ಯ ವಿಭಾಗದ ನಿರ್ದೇಶಕ ನರಹರಿಶಾಸ್ತ್ರಿ, ಬಳಗದ ಕಾರ್ಯದರ್ಶಿ ಎಚ್‌.ಇ.ಕೃಷ್ಣಯ್ಯ ಇದ್ದರು.

# ಸಿಎಫ್‌ಟಿಆರ್‌ಐನಲ್ಲಿ ಕನ್ನಡ ರಾಜ್ಯೋತ್ಸವ



ಮೈಸೂರು: ನಗರದ ಕೇಂದ್ರೀಯ ಆಹಾರ ತಂತ್ರಜ್ಞಾನ ಸಂಶೋಧನಾಲಯ (ಸಿಎಫ್‌ಟಿಆರ್‌ಐ) ಮತ್ತು ಕನ್ನಡ ಸಹೃದಯ ಬಳಗದ ವತಿಯಿಂದ ಕನ್ನಡ ರಾಜ್ಯೋತ್ಸವ ಆಯೋಜಿಸಲಾಗಿತ್ತು.

ಇಲ್ಲಿನ ಚೆಲುವಾಂಬ ಅರಮನೆಯಲ್ಲಿ ನಡೆದ ಕನ್ನಡ ರಾಜ್ಯೋತ್ಸವದ ಧ್ವಜಾರೋಹಣವನ್ನು ಕೆಪಿಸಿಸಿ ಕಾರ್ಯಾಧ್ಯಕ್ಷ ಆರ್. ಧ್ರುವನಾರಾಯಣ್ ನೆರವೇರಿಸಿದರು. ಬಳಿಕ ಮಾತನಾಡಿದ ಅವರು ಭಾರತದ ಪ್ರತಿಷ್ಠಿತ ಆಹಾರ ಸಂಶೋಧನಾ ಕೇಂದ್ರವಾದ ಸಿಎಫ್‌ಟಿಆರ್‌ಐ ಮೈಸೂರಿನಲ್ಲಿರುವುದು ಹೆಮ್ಮೆಯ ಸಂಗತಿ. ನಾನು ಇಲ್ಲಿಗೆ ಮೂರ್ನಾಲ್ಕು ಬಾರಿ ಭೇಟಿ ನೀಡಿದ್ದೇನೆ. ಈ ಹಿಂದೆ ರಾಗಿಮುದ್ದೆ ಮಾಡುವ ಯಂತ್ರ ಮತ್ತು ಇಡ್ಲಿ ತಯಾರಿಕೆ ಯಂತ್ರ ನೋಡಲು ಮತ್ತು ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಬಂದಿದ್ದೆ. ಈ ಬಾರಿ ಕನ್ನಡ ರಾಜ್ಯೋತ್ಸವದಲ್ಲಿ ಪಾಲ್ಗೊಳ್ಳಲು ಆಗಮಿಸಿದ್ದೇನೆ. ದೇಶದ ಎಲ್ಲಾ ಭಾಷೆಯ ಜನರು ಇಲ್ಲಿದ್ದಾರೆ. ನಿಮ್ಮ ಏಕತಾ ಮನೋಭಾವ ಶ್ಲಾಘನೀಯ ಎಂದರು.

ಕರ್ನಾಟಕದ ಏಕೀಕರಣಕ್ಕೆ ಹಲವು ಮಂದಿ ಮಹನೀಯರು ಹೋರಾಟ ನಡೆಸಿದ್ದಾರೆ. ಅವರೆಲ್ಲರ ತ್ಯಾಗದ ಫಲವಾಗಿ ನಾವು ಇಂದು ಏಕೀಕರಣಗೊಂಡ ಕರ್ನಾಟಕದಲ್ಲಿದ್ದೇವೆ. ಅನೇಕ ರಾಜಮನೆತನಗಳು ಕರ್ನಾಟಕವನ್ನು ಆಳ್ವಿಕೆ ನಡೆಸಿದ್ದಾರೆ. ಕಲೆ, ಸಾಹಿತ್ಯ, ಸಂಗೀತ, ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರದಲ್ಲಿಯೂ ಕರ್ನಾಟಕ ಛಾಪು ಮೂಡಿಸಿದೆ ಎಂದರು.

ಸಂಸ್ಥೆ ನಿರ್ದೇಶಕಿ ಡಾ. ಶ್ರೀದೇವಿ ಅನ್ನಪೂರ್ಣ ಸಿಂಗ್ ರಾಜ್ಯೋತ್ಸವ ಸಂದೇಶ ನೀಡಿದರು. ಬಳಿಕ ನಾಡಗೀತೆ ಹಾಡಿ, ಸಿಹಿ ವಿತರಿಸಲಾಯಿತು.